# Akashvani : Bangalore
# National Bulletin In Kannada
# 26.01.2025 / 7.35 am

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**26.01.2025 / 7.35 am**

**<><*<><>*><>**

<u>ಮುಖ್ಯಾಂಶಗಳು</u>

೧.ನವದೆಹಲಿಯ ಕರ್ತವ್ಯ ಪಥದಲ್ಲಿಂದು ರಾಷ್ಟ್ರಪತಿ ನೇತೃತ್ವದಲ್ಲಿ ೭೬ನೇ ಗಣರಾಜ್ಯೋತ್ಸವ ಆಚರಣೆ

೨.ಎಪ್ಪತ್ತೈದು ವರ್ಷಗಳಿಂದ ಸಂವಿಧಾನದ ಮಾರ್ಗದರ್ಶನದಲ್ಲಿ ಭಾರತ ಪ್ರಗತಿ- ರಾಷ್ಟ್ರಪತಿ ದ್ರೌಪದಿ ಮುರ್ಮು

೩.೨೦೨೫ ರ ಸಾಲಿನ ೧೩೯ ಪದ್ಮಪ್ರಶಸ್ತಿ ಪ್ರಕಟ; ಕರ್ನಾಟಕದ ೯ ಸಾಧಕರು ಪ್ರಶಸ್ತಿಗೆ ಭಾಜನ

೪.ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್; ಭಾರತಕ್ಕೆ ಇಂಗ್ಲೆಂಡ್ ವಿರುದ್ಧ ೨ ವಿಕೆಟ್‌ಗಳ ಜಯ

**<><*<><>*><>**

ಇಂದು ದೇಶಾದ್ಯಂತ ೭೬ ನೇ ಗಣರಾಜ್ಯೋತ್ಸವದ ಸಂಭ್ರಮ. ೧೯೫೦ ರ ಈ ದಿನ ಭಾರತ, ಪ್ರಜಾತಂತ್ರ ಕೇಂದ್ರಬಿಂದುವಾದ ಸಂವಿಧಾನವನ್ನು ಅಳವಡಿಸಿಕೊಂಡಿತು. ಸಂವಿಧಾನ ಅಂಗೀಕಾರಗೊಂಡು ೭೫ ವರ್ಷ ಪೂರೈಸುತ್ತಿರುವ ಹಿನ್ನೆಲೆಯಲ್ಲಿ ಈ ವರ್ಷದ ಗಣರಾಜ್ಯೋತ್ಸವವು ವಿಶೇಷವಾಗಿದೆ. ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು, ನವದೆಹಲಿಯ ಕರ್ತವ್ಯ ಪಥದಲ್ಲಿ ನಡೆಯುವ ಗಣರಾಜ್ಯೋತ್ಸವದ ನೇತೃತ್ವ ವಹಿಸಲಿದ್ದಾರೆ. ಗಣರಾಜ್ಯೋತ್ಸವದ ಪಥಸಂಚಲನ ಭಾರತದ ಸಾಂಸ್ಕೃತಿಕ ವೈವಿಧ್ಯತೆ ಮತ್ತು ಮಿಲಿಟರಿ ಪರಾಕ್ರಮದ ವಿಶಿಷ್ಠ ಮಿಶ್ರಣವಾಗಿದೆ. ಪ್ರಧಾನಿ ನರೇಂದ್ರ ಮೋದಿ, ರಾಷ್ಟ್ರೀಯ ಯುದ್ಧ ಸ್ಮಾರಕಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಗಣರಾಜ್ಯೋತ್ಸವ ಪಥಸಂಚಲನ ಪ್ರಾರಂಭವಾಗಲಿದೆ. ಕರ್ತವ್ಯಪಥದಲ್ಲಿ ಸಶಸ್ತ್ರ ಪಡೆ, ಅರೆ ಸೇನಾಪಡೆ, ನಾಗರಿಕ ಪಡೆ, ಎನ್‌ಸಿಸಿ ಮತ್ತು ಎನ್‌ಎಸ್‌ಎಸ್ ಘಟಕಗಳಿಂದ ರಾಷ್ಟ್ರಪತಿ ದ್ರೌಪದಿ ಮುರ್ಮು ಗೌರವ ವಂದನೆ ಸ್ವೀಕರಿಸಲಿದ್ದಾರೆ. ಇಂಡೋನೇಷಿಯಾ ಅಧ್ಯಕ್ಷ ಪ್ರಬೋವೊ ಸುಬಿಯಾಂಟಾ ಗಣರಾಜ್ಯೋತ್ಸವದ ಮುಖ್ಯ ಅತಿಥಿಯಾಗಿ ಭಾಗವಹಿಸುತ್ತಿದ್ದಾರೆ. ಇಂಡೋನೇಷಿಯಾದ ೧೬೦ ಯೋಧರ ತುಕಡಿ ಮತ್ತು ೧೯೦ ಸದಸ್ಯರ ಬ್ಯಾಂಡ್ ತುಕಡಿ ಗಣರಾಜ್ಯೋತ್ಸವ ಪಥಸಂಚಲನದಲ್ಲಿ ಭಾಗವಹಿಸಲಿವೆ. ವಿವಿಧ ರಾಜ್ಯಗಳು ಕೇಂದ್ರಾಡಳಿತ ಪ್ರದೇಶಗಳು, ಕೇಂದ್ರ ಸರ್ಕಾರದ ಸಚಿವಾಲಯಗಳು ಮತ್ತು ಇಲಾಖೆಗಳಿಂದ ೩೧ ಸ್ತಬ್ಧ ಚಿತ್ರಗಳು ಪಥಸಂಚಲನದಲ್ಲಿ ಭಾಗವಹಿಸಲಿವೆ. ಸ್ವರ್ಣ ಭಾರತ - ವಿರಾಸತ್ ಔರ್ ವಿಕಾಸ್ ಈ ವರ್ಷದ ಸ್ತಬ್ಧ ಚಿತ್ರದ ಧ್ಯೇಯವಾಕ್ಯವಾಗಿದೆ. ಗ್ರಾಮ ಪಂಚಾಯತಿ ಸದಸ್ಯರು, ಕರಕುಶಲ ಮತ್ತು ಕೈಮಗ್ಗ

ಕುಶಲಕರ್ಮಿಗಳು, ಸ್ವ-ಸಹಾಯ ಗುಂಪುಗಳು, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು, ರಸ್ತೆ ನಿರ್ಮಾಣ ಕಾರ್ಮಿಕರನ್ನೊಳಗೊಂಡ ಒಟ್ಟು ೧೦ ಸಾವಿರ ವಿಶೇಷ ಅತಿಥಿಗಳನ್ನು ಗಣರಾಜ್ಯೋತ್ಸವ ಕಾರ್ಯಕ್ರಮಕ್ಕೆ ಆಹ್ವಾನಿಸಲಾಗಿದೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

<><*<><>*><>

೭೬ನೇ ಗಣರಾಜ್ಯೋತ್ಸವದ ಸಂದರ್ಭದಲ್ಲಿ ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ದೇಶವಾಸಿಗಳಿಗೆ ಶುಭಾಶಯ ಕೋರಿದ್ದಾರೆ. ೭೫ ವರ್ಷಗಳ ಅದ್ಭುತ ಪ್ರಯಾಣದಲ್ಲಿ ಭಾರತ ಬಲಿಷ್ಠ ಮತ್ತು ಸಮೃದ್ಧವಾಗಿದೆ ಎಂದು ತಮ್ಮ ಸಂದೇಶದಲ್ಲಿ ಓಂ ಬಿರ್ಲಾ ಹೇಳಿದ್ದಾರೆ. ಕೃಷಿಯಿಂದ ಕ್ರೀಡೆಯವರೆಗೆ, ಭೂಮಿಯಿಂದ ಬಾಹ್ಯಾಕಾಶದವರೆಗೆ ದೇಶ ಅನೇಕ ಗಮನಾರ್ಹ ಸಾಧನೆಗಳನ್ನು ಮಾಡಿದೆ. ದೇಶದ ಪ್ರತಿಯೊಬ್ಬ ನಾಗರಿಕನು ಪ್ರಜಾಪ್ರಭುತ್ವ ಪ್ರಕ್ರಿಯೆಯಲ್ಲಿ ಭಾಗವಹಿಸುವಿಕೆ ಹೆಚ್ಚಿಸಲು ಪ್ರತಿಜ್ಞೆ ಮಾಡಬೇಕು ಎಂದು ಓಂ ಬಿರ್ಲಾ ಕರೆ ನೀಡಿದ್ದಾರೆ. ದೇಶ ಸ್ವಾತಂತ್ರ್ಯ ಪಡೆಯಲು ಮತ್ತು ಸಂವಿಧಾನ ರಚನೆಯಲ್ಲಿ ಕೊಡುಗೆ ನೀಡಿದ ಮಹಾನ್ ವ್ಯಕ್ತಿಗಳನ್ನು ಅವರು ಇದೇ ಸಂದರ್ಭದಲ್ಲಿ ಸ್ಮರಿಸಿದ್ದಾರೆ.

<><*<><>*><>

ಗಣರಾಜ್ಯೋತ್ಸವದ ಮುನ್ನಾ ದಿನವಾದ ನಿನ್ನೆ ರಾಷ್ಟ್ರಪತಿ ದ್ರೌಪದಿ ಮುರ್ಮು, ದೇಶವನ್ನುದ್ದೇಶಿಸಿ ಭಾಷಣ ಮಾಡಿದರು. ಈ ವೇಳೆ ಅವರು, ಸಂಸತ್ತಿನಲ್ಲಿ ಮಂಡಿಸಲಾದ 'ಒಂದು ರಾಷ್ಟ್ರ ಒಂದು ಚುನಾವಣೆ' ವಿಧೇಯಕ ಉತ್ತಮ ಆಡಳಿತದ ನಿಯಮಗಳನ್ನು ಮರು ವ್ಯಾಖ್ಯಾನಿಸುವ ಭರವಸೆ ನೀಡುತ್ತದೆ. ಈ ಉಪಕ್ರಮ ಆಡಳಿತದಲ್ಲಿ ಸ್ಥಿರತೆಯನ್ನು ಉತ್ತೇಜಿಸುವ ಜೊತೆಗೆ ಆರ್ಥಿಕ ಹೊರೆಯನ್ನು ತಗ್ಗಿಸುತ್ತದೆ. ಇಂತಹ ಬೃಹತ್ ಸುಧಾರಣೆಗಳಿಗೆ ದಿಟ್ಟ ದೃಷ್ಟಿಕೋನದ ಅಗತ್ಯವಿದೆ ಎಂದು ಪ್ರತಿಪಾದಿಸಿದರು. ೧೯೪೭ ರಿಂದ ಭಾರತೀಯರಲ್ಲಿ ಉಳಿದುಕೊಂಡಿರುವ ವಸಾಹತುಶಾಹಿ ಮನಸ್ಥಿತಿಯ ಅನೇಕ ಅವಶೇಷಗಳನ್ನು ಬದಲಾಯಿಸಲು, ದೇಶವು ಸಂಘಟಿತ ಪ್ರಯತ್ನಗಳಿಗೆ ಸಾಕ್ಷಿಯಾಗಿದೆ. ಭಾರತೀಯ ದಂಡ ಸಂಹಿತೆ, ಅಪರಾಧ ಪ್ರಕ್ರಿಯಾ ಸಂಹಿತೆ ಮತ್ತು ಭಾರತೀಯ ಸಾಕ್ಷ್ಯ ಕಾಯ್ದೆಯನ್ನು ಭಾರತೀಯ ನ್ಯಾಯ ಸಂಹಿತೆ, ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಮತ್ತು ಭಾರತೀಯ ಸಾಕ್ಷ್ಯ ಅಧಿನಿಯಮಗಳೊಂದಿಗೆ ಬದಲಾಯಿಸುವ ನಿರ್ಧಾರವು ಅಂತಹ ಪ್ರಯತ್ನಗಳಲ್ಲಿ ಅತ್ಯಂತ ಗಮನಾರ್ಹವಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು. ನಾಗರಿಕ ಸದ್ಗುಣಗಳು ಸಹಸ್ರಾರು ವರ್ಷಗಳಿಂದ ಜನರ ನೈತಿಕ ದಿಕ್ಸೂಚಿಯ ಭಾಗವಾಗಿರುವುದರಿಂದ ಸಂವಿಧಾನವು ಜೀವಂತ ದಾಖಲೆಯಾಗಿದೆ. ಇದು ೭೫ ವರ್ಷಗಳಿಂದ ಭಾರತದ ಪ್ರಗತಿಯ ಹಾದಿಗೆ ಮಾರ್ಗದರ್ಶನ ನೀಡಿದೆ. ಇಂದು ಭಾರತ ಅಂತಾಷ್ಟ್ರೀಯ ವೇದಿಕೆಗಳಲ್ಲಿ ನಾಯಕತ್ವ ವಹಿಸಿದೆ. ಈ ಸಾಧನೆ ಸಂವಿಧಾನದ ಭದ್ರ ಅಡಿಪಾಯವಿಲ್ಲದೆ ಸಾಧ್ಯವಾಗುತ್ತಿರಲಿಲ್ಲ. ಇದರಿಂದಾಗಿ ದೇಶದ ಆರ್ಥಿಕ ಪ್ರಗತಿ ಏರುಗತಿಯಲ್ಲಿ ಸಾಗಿದ್ದು, ಹೆಚ್ಚಿನ ಜನರಿಗೆ ಬಡತನದಿಂದ ಹೊರಬರಲು ಸಾಧ್ಯವಾಗುತ್ತಿದೆ ಎಂದರು.

ಧ್ವನಿ: ರಾಷ್ಟ್ರಪತಿ ದ್ರೌಪದಿ ಮುರ್ಮು

ಪ್ರಪಂಚದ ಅನೇಕ ಭಾಗಗಳಲ್ಲಿ ಮಹಿಳಾ ಸಮಾನತೆಯು ಕೇವಲ ಆದರ್ಶವಾಗಿರುವಾಗ, ಭಾರತೀಯ ಮಹಿಳೆಯರು ರಾಷ್ಟ್ರದ ಭವಿಷ್ಯವನ್ನು ರೂಪಿಸುವಲ್ಲಿ ಸಕ್ರಿಯವಾಗಿ ಕೊಡುಗೆ ನೀಡುತ್ತಿದ್ದಾರೆ ಎಂದು ರಾಷ್ಟ್ರಪತಿಗಳು ಹರ್ಷ ವ್ಯಕ್ತಪಡಿಸಿದರು. ಗಣರಾಜ್ಯೋತ್ಸವ ಎಲ್ಲಾ ನಾಗರಿಕರಿಗೆ ಸಂತೋಷ ಮತ್ತು ಹೆಮ್ಮೆಯ ವಿಷಯವಾಗಿದೆ. ಕಳೆದ ಎಪ್ಪತ್ತೈದು ವರ್ಷಗಳಲ್ಲಿ, ರಾಷ್ಟ್ರಗಳ ಸೌಹಾರ್ದತೆಯಲ್ಲಿ ತನ್ನ ಸರಿಯಾದ ಸ್ಥಾನವನ್ನು ಮರಳಿ ಪಡೆಯಲು ಭಾರತವು ದಾಪುಗಾಲು ಹಾಕುತ್ತಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು. ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವ ಸದಾ ಭಾರತದ ನಾಗರಿಕತೆಯ ಪರಂಪರೆಯ ಭಾಗವಾಗಿದೆ. ಇತ್ತೀಚಿನ ವರ್ಷಗಳಲ್ಲಿ ಭಾರತದ ಆರ್ಥಿಕ ಬೆಳವಣಿಗೆ ದರ ನಿರಂತರವಾಗಿ ಹೆಚ್ಚಿದೆ. ಇದು ಯುವಕರಿಗೆ ಉದ್ಯೋಗಾವಕಾಶಗಳನ್ನು ಸೃಷ್ಟಿಸಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

<><*<><>*><>

ಗಣರಾಜ್ಯೋತ್ಸವಕ್ಕೂ ಮುನ್ನ ದೇಶವನ್ನುದ್ದೇಶಿಸಿ ಮಾಡಿದ ಸ್ಫೂರ್ತಿದಾಯಕ ಭಾಷಣಕ್ಕಾಗಿ ಪ್ರಧಾನಿ ನರೇಂದ್ರ ಮೋದಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಧನ್ಯವಾದ ಅರ್ಪಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಅವರು, ರಾಷ್ಟ್ರಪತಿ ತಮ್ಮ ಭಾಷಣದಲ್ಲಿ ಸಂವಿಧಾನ ಶ್ರೇಷ್ಠತೆ ಸೇರಿದಂತೆ ಅನೇಕ ವಿಷಯಗಳನ್ನು ಪ್ರಸ್ತಾಪಿಸಿದರು. ಮತ್ತು ರಾಷ್ಟ್ರೀಯ ಪ್ರಗತಿಗೆ ಶ್ರಮಿಸುವ ಅಗತ್ಯವನ್ನು ಒತ್ತಿ ಹೇಳಿದರು ಎಂದು ತಿಳಿಸಿದ್ದಾರೆ.

<><*<><>*><>

೨೦೨೫ ರ ೧೩೯ ಪದ್ಮ ಪ್ರಶಸ್ತಿಗಳನ್ನು ನೀಡಲು ರಾಷ್ಟ್ರಪತಿ ದ್ರೌಪದಿ ಮುರ್ಮು ಅನುಮೋದನೆ ನೀಡಿದ್ದಾರೆ. ದೇಶದ ಅತ್ಯುನ್ನತ ನಾಗರಿಕ ಗೌರವಗಳಲ್ಲಿ ಒಂದಾದ ಈ ಪ್ರಶಸ್ತಿಗಳನ್ನು ಪದ್ಮವಿಭೂಷಣ, ಪದ್ಮಭೂಷಣ ಮತ್ತು ಪದ್ಮಶ್ರೀ ಎಂಬ ಮೂರು ವಿಭಾಗಗಳಲ್ಲಿ ನೀಡಲಾಗುತ್ತದೆ. ಅಸಾಧಾರಣ ಮತ್ತು ವಿಶಿಷ್ಟ ಸೇವೆಗಾಗಿ ಪದ್ಮವಿಭೂಷಣ, ಉನ್ನತ ಶ್ರೇಣಿಯ ವಿಶಿಷ್ಟ ಸೇವೆಗಾಗಿ 'ಪದ್ಮಭೂಷಣ' ಮತ್ತು ಯಾವುದೇ ಕ್ಷೇತ್ರದಲ್ಲಿ ವಿಶಿಷ್ಟ ಸೇವೆಗಾಗಿ 'ಪದ್ಮಶ್ರೀ' ಪ್ರಶಸ್ತಿ ನೀಡಲಾಗಿದೆ. ೨೦೨೫ ರ ವರ್ಷಕ್ಕೆ, ರಾಷ್ಟ್ರಪತಿಗಳು ೧೩೯ ಪದ್ಮ ಪ್ರಶಸ್ತಿಗಳನ್ನು ಅನುಮೋದಿಸಿದ್ದಾರೆ. ಈ ಪಟ್ಟಿಯಲ್ಲಿ ೭ ಪದ್ಮವಿಭೂಷಣ, ೧೯ ಪದ್ಮಭೂಷಣ ಮತ್ತು ೧೧೩ ಪದ್ಮಶ್ರೀ ಪ್ರಶಸ್ತಿಗಳು ಸೇರಿವೆ. ಇದರಲ್ಲಿ ಒಟ್ಟು ೧೩ ಪ್ರಶಸ್ತಿಗಳನ್ನು ಮರಣೋತ್ತರವಾಗಿ ನೀಡಲಾಗುತ್ತಿದೆ. ಪ್ರಶಸ್ತಿ ಪುರಸ್ಕೃತರಲ್ಲಿ ೨೩ ಮಹಿಳೆಯರು ಮತ್ತು ೧೦ ವಿದೇಶಿಯರು ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವಿದೇಶಿಗರು ಸೇರಿದ್ದಾರೆ. ಕಲೆ, ಸಾಮಾಜಿಕ ಕಾರ್ಯ, ಸಾರ್ವಜನಿಕ ವ್ಯವಹಾರಗಳು, ವಿಜ್ಞಾನ ಮತ್ತು ಎಂಜಿನಿಯರಿಂಗ್, ವ್ಯಾಪಾರ ಮತ್ತು ಕೈಗಾರಿಕೆ, ವೈದ್ಯಕೀಯ, ಸಾಹಿತ್ಯ ಮತ್ತು ಶಿಕ್ಷಣ, ಕ್ರೀಡೆ, ನಾಗರಿಕ ಸೇವೆ ಮುಂತಾದ ವಿವಿಧ ವಿಭಾಗಗಳಲ್ಲಿ

ಪ್ರಶಸ್ತಿಗಳನ್ನು ನೀಡಲಾಗುತ್ತದೆ. ಭಾರತೀಯ ಬರಹಗಾರ ಎಂ.ಟಿ. ವಾಸುದೇವನ್ ನಾಯರ್, ಸುಜುಕಿ ಮೋಟಾರ್ ಕಾರ್ಪೊರೇಷನ್‌ನ ಮಾಜಿ ಅಧ್ಯಕ್ಷ ಒಸಾಮು ಸುಜುಕಿ ಮತ್ತು ಗಾಯಕಿ ಶಾರದಾ ಸಿನ್ಹಾ ಅವರಿಗೆ ಮರಣೋತ್ತರವಾಗಿ ಪದ್ಮವಿಭೂಷಣ ಪ್ರಶಸ್ತಿ ನೀಡಲಾಗಿದೆ. ಗಾಯಕ ಪಂಕಜ್ ಉದಾಸ್ ಅವರಿಗೆ ಮರಣೋತ್ತರವಾಗಿ ಪದ್ಮಭೂಷಣ ಪ್ರಶಸ್ತಿ ನೀಡಲಾಗಿದೆ. ಈ ಬಾರಿಯ ಪದ್ಮಪ್ರಶಸ್ತಿಗಳಿಗೆ ಕರ್ನಾಟಕದ ೯ ಸಾಧಕರನ್ನು ಆಯ್ಕೆ ಮಾಡಲಾಗಿದೆ. ವಯೋಲಿನ್ ವಾದಕ ಎಲ್.ಸುಬ್ರಮಣ್ಯಂ ಅವರು ಪದ್ಮವಿಭೂಷಣಕ್ಕೆ ಭಾಜನರಾಗಿದ್ದರೆ, ಕನ್ನಡದ ಚಲನಚಿತ್ರ ರಂಗದ ಹಿರಿಯ ನಟ ಅನಂತನಾಗ್ ಪದ್ಮಭೂಷಣ ಪ್ರಶಸ್ತಿಗೆ ಪಾತ್ರರಾಗಿದ್ದಾರೆ. ಅವರೊಂದಿಗೆ ಸಾಹಿತ್ಯ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಪ್ರಸಾರ ಭಾರತಿ ಮಾಜಿ ಅಧ್ಯಕ್ಷ ಎ.ಸೂರ್ಯಪ್ರಕಾಶ್ ಅವರು ಈ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಎಂದಿನಂತೆ ಈ ಬಾರಿಯೂ ಪದ್ಮಪ್ರಶಸ್ತಿಗಳಿಗಾಗಿ ಕೇಂದ್ರ ಸರ್ಕಾರ ತೆರೆಮರೆಯ ಸಾಧಕರನ್ನು ಆಯ್ಕೆ ಮಾಡಿದ್ದು, ಕಲೆಯ ಕ್ಷೇತ್ರದಲ್ಲಿ ತೊಗಲು ಗೊಂಬೆಯಾಟ ಕಲಾವಿದರಾದ ಬೀಮವ್ವ ದೊಡ್ಡಬಾಳಪ್ಪ ಶಿಳ್ಳೆಕ್ಯಾತಾರ, ಹಾಸನ ರಘು, ವ್ಯಾಪಾರ ಮತ್ತು ಕೈಗಾರಿಕಾ ಕ್ಷೇತ್ರದಲ್ಲಿ ಪ್ರಶಾಂತ್ ಪ್ರಕಾಶ್, ಸಂಗೀತ ಕ್ಷೇತ್ರದಲ್ಲಿ ರಿಕ್ಕಿಕೇಜ್, ಜಾನಪದ ಕಲೆಗಾಗಿ ವೆಂಕಪ್ಪ ಅಂಬಾಜಿ ಸುಗಟೇಕಾರ್, ವೈದ್ಯಕೀಯ ಕ್ಷೇತ್ರದಲ್ಲಿ ಡಾ.ವಿಜಯಲಕ್ಷ್ಮೀ ದೇಶಮಾನೆ ಕರ್ನಾಟಕದಿಂದ ಆಯ್ಕೆಯಾಗಿದ್ದಾರೆ. ಈ ಪ್ರಶಸ್ತಿಗಳನ್ನು ಭಾರತದ ರಾಷ್ಟ್ರಪತಿಗಳು ಪ್ರತಿ ವರ್ಷ ಮಾರ್ಚ್ ಅಥವಾ ಏಪ್ರಿಲ್‌ನಲ್ಲಿ ರಾಷ್ಟ್ರಪತಿ ಭವನದಲ್ಲಿ ನಡೆಯುವ ವಿಧ್ಯುಕ್ತ ಸಮಾರಂಭಗಳಲ್ಲಿ ಪ್ರದಾನ ಮಾಡುತ್ತಾರೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ, ಎಲ್ಲಾ ಪದ್ಮ ಪ್ರಶಸ್ತಿ ಪುರಸ್ಕೃತರನ್ನು ಅಭಿನಂದಿಸಿದ್ದಾರೆ. ಅವರ ಅಸಾಧಾರಣ ಸಾಧನೆಗಳನ್ನು ಗೌರವಿಸಲು ಭಾರತ ಹೆಮ್ಮೆಪಡುತ್ತದೆ ಅವರ ಸಮರ್ಪಣೆ, ಕಠಿಣ ಪರಿಶ್ರಮ, ಉತ್ಸಾಹ ಮತ್ತು ನಾವೀನ್ಯತೆಗೆ ಪ್ರೇರಕವಾಗಿದೆ .ಇದು ಅಸಂಖ್ಯಾತ ಜನರ ಜೀವನದ ಮೇಲೆ ಸಕಾರಾತ್ಮಕ ಪರಿಣಾಮ ಬೀರಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

<><*<><>*><>

೨೦೨೫ರ ಗಣರಾಜ್ಯೋತ್ಸವದ ಮುನ್ನ ದಿನವಾದ ನಿನ್ನೆ ರಾಷ್ಟ್ರಪತಿ ದ್ರೌಪದಿ ಮುರ್ಮು, ೯೩ ಸಶಸ್ತ್ರ ಪಡೆ ಮತ್ತು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಯ ಸಿಬ್ಬಂದಿಗೆ ಶೌರ್ಯ ಪ್ರಶಸ್ತಿಗಳನ್ನು ಅನುಮೋದಿಸಿದ್ದಾರೆ. ಇದರಲ್ಲಿ ೨ ಕೀರ್ತಿ ಚಕ್ರ, ೧೪ ಶೌರ್ಯಚಕ್ರ, ೧ ಬಾರ್ ಟು ಸೇನಾ ಪದಕ, ೬೬ ಸೇನಾಪದಕ, ೨ ನಾವ್ ಸೇನಾ ಪದಕ ಮತ್ತು ೮ ವಾಯುಸೇನಾ ಪದಕಗಳಿಗೆ ಅನುಮೋದನೆ ನೀಡಲಾಗಿದೆ. ಇದರಲ್ಲಿ ೧೧ ಪ್ರಶಸ್ತಿಗಳನ್ನು ಮರಣೋತ್ತರವಾಗಿ ನೀಡಲಾಗುತ್ತಿದೆ. ಮೇಜರ್ ಮಂಜಿತ್ ಮತ್ತು ಮರಣೋತ್ತರವಾಗಿ ನಾಯಕ್ ದಿಲ್ವಾರ್ ಖಾನ್ ಅವರಿಗೆ ಕೀರ್ತಿ ಚಕ್ರ ನೀಡಲಾಗಿದೆ. ಇದೇ ಸಂದರ್ಭದಲ್ಲಿ ರಾಷ್ಟ್ರಪತಿ ಸಶಸ್ತ್ರ ಪಡೆ ಹಾಗೂ ಇತರ ಸಿಬ್ಬಂದಿಗೆ ೩೦೫ ರಕ್ಷಣಾ ಪ್ರಶಸ್ತಿಗಳಿಗೂ ಅನುಮೋದನೆ ನೀಡಿದ್ದಾರೆ. ೩೦ ಪರಮವಿಶಿಷ್ಟ ಸೇವಾಪದಕ, ೫ ಉತ್ತಮ ಯುದ್ಧ ಸೇವಾ ಪದಕ, ೫೭ ಅತಿ ವಿಶಿಷ್ಟ ಸೇವಾ ಪದಕ, ೧೦

ಯುದ್ಧ ಸೇವಾ ಪದಕ, ೧ ಬಾರ್ ಟು ಸೇನಾ ಪದಕ, ೪೩ ಸೇನಾ ಪದಕ, ೮ ನಾವ್ ಸೇನಾ ಪದಕ ೧೫ ವಾಯು ಸನಾ ಪದಕ ಹಾಗೂ ೧೩೨ ವಿಶಿಷ್ಟ ಸೇವಾ ಪದಕ ಒಳಗೊಂಡಿದೆ.

<><*<><>*><>

ಗಣರಾಜ್ಯೋತ್ಸವದ ಸಂದರ್ಭದಲ್ಲಿ ಇಂದು ಮಹಾಕುಂಭ ಮೇಳದಲ್ಲಿ ಭಕ್ತರು ಮತ್ತು ಪ್ರವಾಸಿಗರು ಭವ್ಯ ಸಾಂಸ್ಕೃತಿಕ ಸಂಭ್ರಮಕ್ಕೆ ಸಾಕ್ಷಿಯಾಗಲಿದ್ದಾರೆ. ಮುಖ್ಯ ಕಾರ್ಯಕ್ರಮ ಗಂಗಾ ಮಂಟಪದಲ್ಲಿ ನಡೆಯಲಿದೆ. ಮಹಾಕುಂಭದಲ್ಲಿ , ನಾಲ್ಕು ಮಂಟಪಗಳಾದ ಗಂಗಾ, ಯಮುನಾ, ಸರಸ್ವತಿ ಮತ್ತು ತ್ರಿವೇಣಿಯಲ್ಲಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಉತ್ತರ ಪ್ರದೇಶ ಸಂಸ್ಕೃತಿ ಇಲಾಖೆ ಆಯೋಜಿಸಿರುವ ಈ ಕಾರ್ಯಕ್ರಮದಲ್ಲಿ ಶಾಸ್ತ್ರೀಯ ಮತ್ತು ಅರೆ-ಶಾಸ್ತ್ರೀಯ ಪ್ರದರ್ಶನಗಳು ನಡೆಯಲಿದ್ದು, ಇದು ಪ್ರೇಕ್ಷಕರನ್ನು ಆಧ್ಯಾತ್ಮಿಕ ಪ್ರಯಾಣಕ್ಕೆ ಕರೆದೊಯ್ಯಲಿದೆ. ಒಂದೆಡೆ, ಫರೂವಾಹಿ, ಬಿಹಾ಼ ಮತ್ತು ಅಲ್ಹಾದಂತಹ ಪ್ರದರ್ಶನಗಳ ಮೂಲಕ ಪ್ರೇಕ್ಷಕರಿಗೆ ಉತ್ತರ ಪ್ರದೇಶದ ಗ್ರಾಮೀಣ ಸಂಸ್ಕೃತಿಯನ್ನು ಪರಿಚಯಿಸಲಾಗುವುದು, ಮತ್ತೊಂದೆಡೆ, ಕುಚಿಪುಡಿ, ಭರತನಾಟ್ಯ, ಕಥಕ್ ಸೇರಿದಂತೆ ಶಾಸ್ತ್ರೀಯ ಪ್ರದರ್ಶನಗಳನ್ನು ಇತರ ಶಾಸ್ತ್ರೀಯ ಸಂಗೀತ ಮತ್ತು ನೃತ್ಯಗಳು ನಡೆಯಲಿವೆ. ಸಂಜೆ ಡ್ರೋನ್ ಪ್ರದರ್ಶನವನ್ನು ಭಕ್ತರು ವೀಕ್ಷಿಸಲಿದ್ದಾರೆ. ಪ್ರಯಾಗರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳsದಲ್ಲಿ ಇದುವರೆಗೆ ಸುಮಾರು ಹನ್ನೊಂದು ಕೋಟಿ ಭಕ್ತರು ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದ್ದಾರೆ.

<><*<><>*><>

ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಎರಡನೇ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಭಾರತ, ಇಂಗ್ಲೆಂಡ್ ವಿರುದ್ಧ ೨ ವಿಕೆಟ್‌ಗಳ ಜಯ ಗಳಿಸಿದೆ.  ಮೊದಲು ಬ್ಯಾಟಿಂಗ್ ಮಾಡಿದ ಇಂಗ್ಲೆಂಡ್ ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೬೫ ರನ್ ಗಳಿಸಿತು. ೧೬೬ ರನ್‌ಗಳ ಗುರಿಯನ್ನು ಬೆನ್ನತ್ತಿದ ಭಾರತ, ೧೯.೨ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ತನ್ನ ಗುರಿ ತಲುಪಿ ಗೆಲುವಿನ ನಗೆ ಬೀರಿತು. ಆ ಮೂಲಕ ೫ ಪಂದ್ಯಗಳ ಸರಣಿಯಲ್ಲಿ ಮೊದಲೆರಡು ಪಂದ್ಯಗಳನ್ನು ಗೆದ್ದು, ಮುನ್ನಡೆ ಸಾಧಿಸಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>